ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 165 ವರ್ಗಾವಣೆ 2016-17 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:07-04-2017

## ಸುತ್ತೋಲೆ

ವಿಷಯ: ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ EMIS ತಂತ್ರಾಂಶದಲ್ಲಿ ಮಾಹಿತಿಗಳನ್ನು ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ:17-01-2017.

*****

2017-18ನೇ ಸಾಲಿನ ವರ್ಗಾವಣೆ ಹಾಗೂ 2160 ಹೊಸ ಉಪನ್ಯಾಸಕರುಗಳ ನೇಮಕಾತಿ ಪ್ರಕ್ರಿಯೆ ಸಂಬಂಧದಲ್ಲಿ ಕಾರ್ಯಭಾರ/ಖಾಲಿ ಹುದ್ದೆ ಮಾಹಿತಿಗಳು ಅಗತ್ಯವಿದ್ದು, ಪ್ರಸ್ತುತ ತಮ್ಮ ಕಾಲೇಜಿನಲ್ಲಿ 2016-17ನೇ ಸಾಲಿನಲ್ಲಿ ಲಭ್ಯವಿರುವ ಎಲ್ಲಾ ವಿಷಯವಾರು ನಿಖರವಾದ ಬೋಧನಾ ಕಾರ್ಯಭಾರ ವಿವರಗಳನ್ನು ಕಾಲೇಜಿನ ಇಎಂಐಎಸ್ ತಂತ್ರಾಂಶದಲ್ಲಿ ನಮೂದಿಸುವಂತೆ ಮತ್ತು ಕಾಲೇಜಿನಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ (ಲೀನ್ ಹೊಂದಿರುವ) ಬೋಧಕರ ವಿವರಗಳನ್ನು ಇಎಂಐಎಸ್‌ನಲ್ಲಿ ಸರಿಯಾಗಿರುವ ಬಗ್ಗೆ ಪರಿಶೀಲಿಸಿ, ದೃಢೀಕರಿಸಿ ಅಪ್‌ಲೋಡ್ ಮಾಡುವಂತೆ ಉಲ್ಲೇಖ (1)ರಲ್ಲಿ ಸೂಚಿಸಲಾಗಿರುತ್ತದೆ. ಸದರಿ ಸುತ್ತೋಲೆಯಲ್ಲಿ Work Load Details ಹಾಗೂ Faculty Profile Reports ಗಳನ್ನು ಪರಿಶೀಲಿಸಿ ಸರಿಯಾಗಿರುವುದನ್ನು ಖಚಿತಪಡಿಸಿಕೊಂಡು Upload Work load and Staff details ನಲ್ಲಿ Upload ಮಾಡಲು ಸೂಚಿಸಲಾಗಿರುತ್ತದೆ. ಈ ರೀತಿ ಈಗಾಗಲೇ ಮಾಹಿತಿಯನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮತ್ತೊಮ್ಮೆ ವಿವರಗಳು ಸರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಅಗತ್ಯವಿದ್ದಲ್ಲಿ ಸರಿಯಾದ ಮಾಹಿತಿಯನ್ನು ಅಪ್‌ಲೋಡ್ ಮಾಡಲು ಪ್ರಾಂಶುಪಾಲರಿಗೆ ತಿಳಿಸಲಾಗಿದೆ. ಒಂದೊಮ್ಮೆ ಮೇಲ್ಕಂಡ ಮಾಹಿತಿಗಳನ್ನು ಅಪ್‌ಲೋಡ್ ಮಾಡಿಲ್ಲದಿದ್ದಲ್ಲಿ ಮಾಹಿತಿ ಸರಿ ಇರುವ ಬಗ್ಗೆ ಮತ್ತೊಮ್ಮೆ ಖಚಿತಪಡಿಸಿಕೊಂಡು ಸರಿಯಾದ ಮಾಹಿತಿಗಳನ್ನು Download ಮಾಡಿ, ಪ್ರಿಂಟ್ ತೆಗೆದು ಪ್ರಾಂಶುಪಾಲರಿಂದ ದೃಢೀಕರಿಸಿ, ದೃಢೀಕೃತ ಸ್ಕ್ಯಾನ್ಡ್ ಕಾಪಿಗಳನ್ನು ದಿನಾಂಕ:11-04-2017ರ ಒಳಗಾಗಿ ಅಪ್‌ಲೋಡ್ ಮಾಡಲು ತಿಳಿಸಲಾಗಿದೆ.

ಅದೇ ಪ್ರಕಾರವಾಗಿ Non-Teaching Staff Reports ಲಿಂಕ್‌ನಲ್ಲಿನ ವಿವರಗಳನ್ನು ಕೂಡಾ Download ಮಾಡಿಕೊಂಡು ಸದರಿ ವಿವರಗಳು ಸರಿಯಿದೆ ಎಂದು ಖಚಿತಪಡಿಸಿಕೊಳ್ಳಲು ಹಾಗೂ ಅಗತ್ಯವಿದ್ದಲ್ಲಿ ಸರಿಯಾದ ಮಾಹಿತಿಯನ್ನು ದಿನಾಂಕ:11-04-2017ರ ಒಳಗಾಗಿ ಅಪ್‌ಲೋಡ್ ಮಾಡಿ ಸರಿ ಇರುವ ಬಗ್ಗೆ ಮತ್ತೊಮ್ಮೆ ಖಚಿತಪಡಿಸಿಕೊಳ್ಳಲು ತಿಳಿಸಲಾಗಿದೆ.

2017-18ನೇ ಸಾಲಿನ ವರ್ಗಾವಣೆ ಪ್ರಕ್ರಿಯೆಗೆ EMIS ನಲ್ಲಿ ಲಭ್ಯವಿರುವ ಮಾಹಿತಿಯ ಆಧಾರದ ಮೇಲೆ ಕೈಗೊಳ್ಳಲಾಗುತ್ತಿದ್ದು EMIS ನಲ್ಲಿ ಮಾಹಿತಿಗಳನ್ನು ಅಪ್‌ಲೋಡ್ ಮಾಡುವ ಸಂದರ್ಭದಲ್ಲಿ, ಅಪೂರ್ಣ ಮಾಹಿತಿಗಳನ್ನು ಮಾಡುವುದು ಹಾಗೂ ಮಾಹಿತಿಗಳನ್ನು ಪರಿಶೀಲಿಸದೇ ತಪ್ಪು ಮಾಹಿತಿಗಳನ್ನು ಅಪ್‌ಲೋಡ್ ಮಾಡುವುದು, ಕಾಲೇಜಿನಲ್ಲಿ ಲೀನ್ ಹೊಂದದಿರುವ ಸಿಬ್ಬಂದಿಗಳ ವಿವರಗಳನ್ನು ಅಪ್‌ಲೋಡ್ ಮಾಡದಿರುವುದು, ಕಾರ್ಯಭಾರ ವಿವರಗಳನ್ನು ಸರಿಯಾಗಿ ನೀಡದಿರುವುದು ಮೊದಲಾದ ನ್ಯೂನತೆಗಳು ಕಂಡು ಬಂದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು ಹಾಗೂ ಸಿಬ್ಬಂದಿಗಳನ್ನು ಹೊಣೆಗಾರರನ್ನಾಗಿ ಮಾಡಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಈ ಮೂಲಕ ತಿಳಿಸಲಾಗಿದೆ.

Swlpay

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ:-

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ – ತುರ್ತು ಕ್ರಮಕ್ಕಾಗಿ.
3. ಸಂಬಂಧಪಟ್ಟ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು, ದೈಹಿಕ ಶಿಕ್ಷಣ ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿಗಳಿಗೆ-ಅಗತ್ಯ ಕ್ರಮಕ್ಕಾಗಿ.
4. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.

*DCE_165 Circular*